Bruhat Bengaluru
Mahanagara Palike

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಕನ್ನಡ ದಿನಪತ್ರಿಕೆಗಳ ತುಣಕು

## 21-12-2020



# ಪರಿವಿಡಿ

1. ಪ್ರಜಾ ವಾಣಿ
2. ಕನ್ನಡ ಪ್ರಭ
3. ವಿಜಯ ಕರ್ನಾಟಕ
4. ವಿಜಯ ವಾಣಿ
5. ವಿಶ್ವ ವಾಣಿ
6. ಉದಯ ವಾಣಿ
7. ಸಂಯುಕ್ರ ಕರ್ನಾಟಕ
8. ಹೊಸ ದಿಗಂತ
9. ವಾರ್ತಾ ಭಾರತಿ
10. ಸಂಜೆ ವಾಣಿ
11. ಈ ಸಂಜೆ

ಪ್ರಜಾವಾಣಿ
ಅತ್ಯಂತ ವಿಶ್ವಾಸಾರ್ಹ ಸುದ್ದಿ ಮಾಧ್ಯಮ




‘ಫಿಟ್ ಇಂಡಿಯಾ’ ಅಭಿಯಾನದ ಅಂಗವಾಗಿ ಬಿಬಿಎಂಪಿ ಹಾಗೂ ಬೆಂಗಳೂರು ಸ್ಮಾರ್ಟ್ ಸಿಟಿ ಸಂಸ್ಥೆಯ ಸಹಯೋಗದಲ್ಲಿ ನಗರದಲ್ಲಿ ಭಾನುವಾರ ಏರ್ಪಡಿಸಿದ್ದ ಸೈಕ್ಲೋಥಾನ್‌ನಲ್ಲಿ ಬೆಂಗಳೂರು ಸ್ಮಾರ್ಟ್ ಸಿಟಿ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ ರಾಜೇಂದ್ರ ಚೋಳನ್, ಬಿಬಿಎಂಪಿ ಆಡಳಿತಾಧಿಕಾರಿ ಗೌರವ್ ಗುಪ್ತ ಹಾಗೂ ಆಯುಕ್ತ ಎನ್. ಮಂಜುನಾಥ್ ಪ್ರಸಾದ್ ಸೇರಿದಂತೆ ಅನೇಕರು ಭಾಗವಹಿಸಿದರು. ಕಾರ್ಯಕ್ರಮದ ಬಳಿಕ ಕೊರೊನಾ ಯೋಧರನ್ನು ಗೌರವಿಸಲಾಯಿತು –ಪ್ರಜಾವಾಣಿ ಚಿತ್ರ

ಕನ್ನಡಪ್ರಭ

# ಫಿಟ್ ಇಂಡಿಯಾ ಸೈಕ್ಲಥಾನ್

## ಬಿಬಿಎಂಪಿ ಆಡಳಿತಾಧಿಕಾರಿ ಗೌರವ್ ಗುಪ್ತಾ ಚಾಲನೆ | ಕೊರೋನಾ ವಾರಿಯರ್ಸ್‌ಗಳಿಗೆ ಸನ್ಮಾನ



ಫಿಟ್ ಇಂಡಿಯಾ ಅಭಿಯಾನದ ಅಂಗವಾಗಿ ನಗರದಲ್ಲಿ ಆಯೋಜಿಸಿದ್ದ ಸೈಕ್ಲಥಾನ್‌ಗೆ ಬಿಬಿಎಂಪಿ ಆಡಳಿತಾಧಿಕಾರಿ ಗೌರವ್ ಗುಪ್ತಾ ಚಾಲನೆ ನೀಡಿದರು. ಬಿಬಿಎಂಪಿ ಆಯುಕ್ತ ಮಂಜುನಾಥ್ ಪ್ರಸಾದ್ ಇನ್ನಿತರರಿದ್ದರು.

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಫಿಟ್ ಇಂಡಿಯಾ ಅಭಿಯಾನದ ಅಂಗವಾಗಿ ಭಾನುವಾರ ಬಿಬಿಎಂಪಿ ಹಾಗೂ ಬೆಂಗಳೂರು ಸ್ಮಾರ್ಟ್ ಸಿಟಿ ವತಿಯಿಂದ ಸೈಕ್ಲಥಾನ್ ಹಮ್ಮಿಕೊಳ್ಳಲಾಗಿತ್ತು. ಇದೇ ವೇಳೆ ನಗರದಲ್ಲಿ ಕೊರೋನಾ ಸೋಂಕು ನಿಯಂತ್ರಣಕ್ಕೆ ಶ್ರಮಿಸಿದ ಕೊರೋನಾ ವಾರಿಯರ್ಸ್‌ಗಳಿಗೆ ಗೌರವ ಸಲ್ಲಿಸಲಾಯಿತು.

ಈ ವೇಳೆ ಮಾತನಾಡಿದ ಬಿಬಿಎಂಪಿ ಆಯುಕ್ತ ಮಂಜುನಾಥ ಪ್ರಸಾದ್, ಪ್ರತಿಯೊಬ್ಬ ನಾಗರಿಕರೂ ಆರೋಗ್ಯವಾಗಿ, ದೈಹಿಕವಾಗಿ ಸದೃಢವಾಗಿರಬೇಕಾದರೆ ಪ್ರತಿನಿತ್ಯ ದೈಹಿಕ ಕಸರತ್ತು ಮುಖ್ಯವಾಗಿದೆ ಎಂದರು. ನಗರದಲ್ಲಿ ಕೊರೋನಾ ಸೋಂಕು ನಿಯಂತ್ರಿಸಲು ಹಗಲಿರುಳು ಶ್ರಮಿಸಿದ ಸಾಕಷ್ಟು ಕೋವಿಡ್ ವಾರಿಯರ್ಸ್‌ಗಳು ನಗರದಲ್ಲಿದ್ದಾರೆ. ಅವರಲ್ಲಿ ಕೆಲವರನ್ನು ಗುರುತಿಸಿ ಸನ್ಮಾನಿಸುತ್ತಿರುವುದಕ್ಕೆ ಶ್ಲಾಘನೆ ವ್ಯಕ್ತಪಡಿಸಿದರು.

ಕೊರೋನಾ ವಾರಿಯರ್ಸ್ ಆಗಿ ಕಾರ್ಯ ನಿರ್ವಹಿಸಿದ ವೈದ್ಯರು, ಸಂಚಾರಿ ವಿಭಾಗದ ಪೊಲೀಸರು ಹಾಗೂ ಮಾರ್ಷಲ್‌ಗಳಿಗೆ ₹2 ಸಾವಿರ ಗೌರವ ಧನ, ಸ್ಮರಣಿಕೆ ನೀಡಿ ಗೌರವಿಸಲಾಯಿತು. ಇದಕ್ಕೂ ಮುನ್ನ ಸೈಕ್ಲಥಾನ್ ಜಾಥಾಕ್ಕೆ ಬಿಬಿಎಂಪಿ ಆಡಳಿತಾಧಿಕಾರಿ ಗೌರವ್ ಗುಪ್ತಾ ಚಾಲನೆ ನೀಡಿದರು. ಸೈಕ್ಲಥಾನ್ ಹಡ್ಸನ್ ವೃತ್ತದಿಂದ ಚಿನ್ನಸ್ವಾಮಿ ಕ್ರೀಡಾಂಗಣದ ಕಸ್ತೂರಬಾ ರಸ್ತೆ(ಕ್ವೀನ್ಸ್ ರಸ್ತೆ) ಮೂಲಕ ಜಿ.ಪಿ.ಒ ವೃತ್ತ, ರಾಜಭವನ ರಸ್ತೆ, ಚಾಲುಕ್ಯ ವೃತ್ತ, ಡಾ। ಬಿ.ಆರ್.ಅಂಬೇಡ್ಕರ್ ವೀಧಿ (ಎಂ.ಎಸ್.ಕಟ್ಟಡ ಮಾರ್ಗವಾಗಿ), ಕೆ.ಆರ್.ವೃತ್ತ, ನೃಪತುಂಗ ರಸ್ತೆ ಮಾರ್ಗವಾಗಿ ಮತ್ತೆ ಹಡ್ಸನ್ ವೃತ್ತ ತಲುಪುವ ಮೂಲಕ ಸೈಕ್ಲಥಾನ್ ಪೂರ್ಣಗೊಂಡಿತ್ತು.

ಬೆಂಗಳೂರು ಸ್ಮಾರ್ಟ್ ಸಿಟಿ ಲಿ. ವ್ಯವಸ್ಥಾಪಕ ನಿರ್ದೇಶಕ ರಾಜೇಂದ್ರ, ಚೋಳನ್, ಪೂರ್ವ ವಲಯ ಜಂಟಿ ಆಯುಕ್ತೆ ಪಲ್ಲವಿ, ಮುಖ್ಯ ಆರೋಗ್ಯಾಧಿಕಾರಿ ಡಾ। ವಿಜೇಂದ್ರ ಸಂಚಾರ ವಿಭಾಗದ ಡಿಸಿಪಿ ನಾರಾಯಣ್ ಇತರರು ಉಪಸ್ಥಿತರಿದ್ದರು.

VK ವಿಜಯ ಕರ್ನಾಟಕ

### ತಮಿಳುನಾಡು ಸಂಪರ್ಕಿಸುವ ಪ್ರಮುಖ ರಸ್ತೆಯಲ್ಲಿ ಅವ್ಯವಸ್ಥೆ

# ಅತ್ತಿಬೆಲೆ-ಆನೇಕಲ್ ರಸ್ತೆ ಗುಂಡಿಮಯ

■ **ಸಾಗರ್ ಎಂ.** ಆನೇಕಲ್

ತಾಲೂಕಿನ ಅತ್ತಿಬೆಲೆ-ಆನೇಕಲ್ ಮುಖ್ಯ ರಸ್ತೆಯಲ್ಲಿ ಟಿವಿಎಸ್ ಕ್ರಾಸ್ ನಿಂದ ಅತ್ತಿಬೆಲೆವರೆಗಿನ ಒಂದು ಕಿ.ಮೀ ಗೂ ಹೆಚ್ಚು ದೂರದ ರಸ್ತೆ ಸಂಪೂರ್ಣ ಹಾಳಾಗಿದ್ದು, ಜನರು ರಸ್ತೆಯಲ್ಲಿ ಸಂಚರಿಸಬೇಕಾದರೆ ಹರಸಾಹಸಪಡಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ.

ತಮಿಳುನಾಡಿಗೆ ಸಂಪರ್ಕ ಕಲ್ಪಿಸುವ ಈ ರಸ್ತೆಯಲ್ಲಿ ಪ್ರತಿನಿತ್ಯ ಸರಕು ಸಾಗಣೆ ಲಾರಿಗಳು, ಟಿಪ್ಪರ್ ಲಾರಿಗಳು ಸೇರಿ ಸಾವಿರಾರು ವಾಹನಗಳು ಸಂಚರಿಸುತ್ತವೆ. ಕಳೆದ ವಾರ ಸುರಿದ ಮಳೆಗೆ ಪರಿಸ್ಥಿತಿ ಮತ್ತಷ್ಟು ಬಿಗಡಾಯಿಸಿದ್ದು, ಗುಂಡಿಗಳಲ್ಲಿ ನೀರು ತುಂಬಿಕೊಂಡು, ರಸ್ತೆ ಯಾವುದು? ಗುಂಡಿ ಯಾವುದು ಎಂಬುದೇ ಗೊತ್ತಾಗದ ಪರಿಸ್ಥಿತಿ ನಿರ್ಮಾಣವಾಗಿದೆ. ನಿರ್ವಹಣೆ ಹೊಣೆ ಹೊತ್ತಿರುವ ಕೆಆರ್ ಡಿಸಿಎಲ್ ಗುಂಡಿ ಮುಚ್ಚಲು ಮುಂದಾಗದಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ.

''ಅತ್ತಿಬೆಲೆ ಮತ್ತು ಬಳ್ಳೂರು ರಸ್ತೆಯ ಮಾರ್ಗಮಧ್ಯೆ ಮೇಲ್ಸೇತುವೆ ಕಾಮಗಾರಿ ನಡೆಯುತ್ತಿದ್ದು, ರಸ್ತೆ ಪಕ್ಕದ ಮರಗಳು ತೆರವು ಮಾಡಲು ಕೋರ್ಟ್‌ನಿಂದ ಆದೇಶ ಬರಬೇಕಿದ್ದು, ಬಂದ ಕೂಡಲೇ ಶೀಘ್ರವೇ ಕಾಮಗಾರಿ ಮುಗಿಸಲಾಗುವುದು,'' ಎಂದು ಕೆಆರ್‌ಡಿಸಿಎಲ್ ಸಹಾಯಕ ಕಾರ್ಯಪಾಲಕ ಅಭಿಯಂತರ ಎಂ.ನಾಗರಾಜು ವಿಜಯ ಕರ್ನಾಟಕಕ್ಕೆ ತಿಳಿಸಿದ್ದಾರೆ.



ಅತ್ತಿಬೆಲೆ-ಆನೇಕಲ್ ರಸ್ತೆಯ ಟಿವಿಎಸ್ ಕ್ರಾಸ್ ಸಮೀಪ ಅವ್ಯವಸ್ಥೆ.



**ಮಳೆ ನೀರು ನಿಂತು ಸಮಸ್ಯೆ**

ಅತ್ತಿಬೆಲೆ ಬಳ್ಳೂರು ರಸ್ತೆಯನ್ನು ಕೆಆರ್‌ಡಿಸಿಎಲ್‌ಗೆ ಹಸ್ತಾಂತರಿಸಲಾಗಿದೆ. ವಿಮಾನ ನಿಲ್ದಾಣಕ್ಕೆ ರಸ್ತೆ ಕಲ್ಪಿಸುವ ನಿಟ್ಟಿನಲ್ಲಿ ಅದನ್ನು ಮೇಲ್ದರ್ಜೆಗೆ ಏರಿಸಲಾಗಿದ್ದು, ಸರಕಾರದಿಂದ ಹಣ ಬಿಡುಗಡೆಯಾಗದ ಕಾರಣ ರಸ್ತೆ ದುರಸ್ತಿ ಕಾರ್ಯ ವಿಳಂಬವಾಗಿದೆ. ಸರಕಾರಕ್ಕೆ ಮನವಿ ಸಲ್ಲಿಸಿ ದುರಸ್ತಿ ಕಾಮಗಾರಿಯನ್ನು ಶೀಘ್ರ ಕೈಗೆತ್ತಿಕೊಳ್ಳುವಂತೆ ಮಾಡಲಾಗುವುದು.

– **ಬಿ.ಶಿವಣ್ಣ,** ಆನೇಕಲ್ ಶಾಸಕ

VK
ವಿಜಯ ಕರ್ನಾಟಕ

### ಜಕ್ಕೂರು ಬಳಿ ರೈಲ್ವೆ ಗೇಟ್‌ನಲ್ಲಿ ಕಾಯುವ ಕಿರಿಕಿರಿ

# ಅಂಡರ್‌ಪಾಸ್‌ಗೆ ಗ್ರಹಣ





**ಬಿಬಿಎಂಪಿ, ರೈಲ್ವೆ ಇಲಾಖೆ ನಡುವೆ ಸಮನ್ವಯ ಕೊರತೆ**

■ **ವಿಕ ಸುದ್ದಿಲೋಕ** ಬೆಂಗಳೂರು

ಜಕ್ಕೂರಿನ ಶಿವರಾಮ ಕಾರಂತ ಲೇಔಟ್‌ನಲ್ಲಿ ಗಡುವಿನ ಅವಧಿಯೊಳಗೆ ಅಂಡರ್‌ಪಾಸ್ ಕಾಮಗಾರಿ ಪೂರ್ಣಗೊಳ್ಳದೆ ಜನರ ಪರದಾಟ ಮುಂದುವರಿದಿದೆ.

2020ರ ಫೆಬ್ರವರಿಯಲ್ಲಿ ಅಂಡರ್‌ಪಾಸ್ ಕಾಮಗಾರಿಯನ್ನು ಆರಂಭಿಸಲಾಗಿತ್ತು. ಕಾಮಗಾರಿ ಮುಗಿಸಲು ಮೂರು ತಿಂಗಳ ಗಡುವು ನೀಡಲಾಗಿತ್ತು. 10 ತಿಂಗಳು ಕಳೆದರೂ ಕಾಮಗಾರಿ ಪೂರ್ಣಗೊಂಡಿಲ್ಲ.

ನಿತ್ಯವೂ ಈ ಮಾರ್ಗದಲ್ಲಿ 20 ರೈಲುಗಳು ಸಂಚರಿಸುತ್ತವೆ. ರೈಲ್ವೆ ಗೇಟ್ ತೆರೆದಾಗ ವಾಹನ ಸವಾರರು ಅತ್ತಿಂದಿತ್ತ ಸಂಚರಿಸಬೇಕಿದೆ ಇಲ್ಲವೇ ಸುತ್ತು ಬಳಸಿನ ಹಾದಿ ಬಳಕೆ ಮಾಡಬೇಕಿದೆ.

ಈ ಬಗ್ಗೆ ಪ್ರತಿಕ್ರಿಯಿಸಿರುವ ಟೆಲಿಕಾಂ ಲೇಔಟ್‌ನ ಸಂಜೀವ ದ್ಯಾಮಣ್ಣನವರ್, ''ಈ ಅಂಡರ್‌ಪಾಸ್ ಜಕ್ಕೂರು ಮತ್ತು ಆರ್.ಕೆ. ಹೆಗಡೆ ನಗರವನ್ನು ಸಂಪರ್ಕಿಸುತ್ತದೆ. ರೈಲ್ವೆ ಹಳಿ ಡಬ್ಲಿಂಗ್ ಹಿನ್ನೆಲೆಯಲ್ಲಿ ರೈಲುಗಳ ಓಡಾಟ ಇನ್ನಷ್ಟು ಹೆಚ್ಚಲಿದೆ. ನೈರುತ್ಯ ರೈಲ್ವೆ ಇಲಾಖೆಯು ಸಂಚಾರ ಸಮಸ್ಯೆ ಪರಿಹರಿಸುವ ನಿಟ್ಟಿನಲ್ಲಿ ಕಾಮಗಾರಿಯನ್ನು ಶೀಘ್ರ ಮುಗಿಸಬೇಕಿದೆ,'' ಎಂದು ಹೇಳಿದರು.

''ಭಾರತೀಯ ಸಿಟಿಯಿಂದ ಜಕ್ಕೂರು ತಲುಪಲು ಅರ್ಧ ಗಂಟೆ ಬೇಕಾಗುತ್ತಿದೆ. ರೈಲ್ವೆ ಇಲಾಖೆ ಹಾಗೂ ಬಿಬಿಎಂಪಿ ಸಮನ್ವಯವಿಲ್ಲದೆ ಕಾಮಗಾರಿ ವಿಳಂಬವಾಗಿದೆ,'' ಭಾರತೀಯ ಸಿಟಿಯ ನಿವಾಸಿ ಪ್ರಶಾಂತ್ ರಾವ್ ದೂರಿದರು.

**ವಿಳಂಬದಿಂದ ನಿರಾಸೆ**

''ಅಂಡರ್‌ಪಾಸ್ ನಿರ್ಮಾಣ ಮಾಡಲು ನಾಲ್ಕು ವರ್ಷಗಳ ಹಿಂದೆಯೇ ಪ್ರಸ್ತಾವನೆ ಸಲ್ಲಿಸಲಾ ಗಿತ್ತು ಎನ್ನಲಾಗುತ್ತಿದೆ. ಫೆಬ್ರವರಿಯಲ್ಲಿ ಕಾಮಗಾರಿ ಆರಂಭವಾದಾಗ ಸಂಚಾರ ಸಮಸ್ಯೆಗೆ ಪರಿಹಾರ ಸಿಗಬಹುದು ಎಂಬ ನಿಟ್ಟಿನಲ್ಲಿ ಸಂತಸವಾಗಿತ್ತು. ಆದರೆ, ಇನ್ನೂ ಕಾಮಗಾರಿ ಮುಗಿಯದಿರುವುದು ಬೇಸರ ತಂದಿದೆ,'' ಎಂದು ಶಿವರಾಮ ಕಾರಂತ ಬಡಾವಣೆಯ ನಿವಾಸಿ ಸುದರ್ಶನ ಎಂ. ಹೇಳಿದರು.

VK ವಿಜಯ ಕರ್ನಾಟಕ

# ಬೆಳ್ಳಂದೂರು, ವರ್ತೂರು ಕೆರೆ ಪುನಶ್ಚೇತನಕ್ಕೆ ಚಾಲನೆ

**ಮಹದೇವಪುರ:** ಬೆಳ್ಳಂದೂರು ಹಾಗೂ ವರ್ತೂರು ಕೆರೆಗಳ ಪುನಶ್ಚೇತನ ಕಾಮಗಾರಿಗೆ ಶಾಸಕ ಅರವಿಂದ ಲಿಂಬಾವಳಿ ಚಾಲನೆ ನೀಡಿದರು.

ನಂತರ ಮಾತನಾಡಿದ ಶಾಸಕರು, "ಕ್ಷೇತ್ರದಲ್ಲಿನ 96 ಕೆರೆಗಳ ಪೈಕಿ 41 ಕೆರೆಗಳ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲಾಗಿದ್ದು, ಕೆರೆಗಳ ಅಭಿವೃದ್ಧಿಗೆ ಹೆಚ್ಚು ಒತ್ತು ನೀಡಲಾಗಿದೆ. 916.17 ಗುಂಟೆ ವಿಸ್ತೀರ್ಣ ಹೊಂದಿರುವ ಬೆಳ್ಳಂದೂರು ಕೆರೆ ಅಭಿವೃದ್ಧಿಗೆ ಮೊದಲನೇ ಹಂತದಲ್ಲಿ 103.66 ಲಕ್ಷ ರೂ. ಹಾಗೂ 439.94 ಗುಂಟೆ ವಿಸ್ತೀರ್ಣ ಹೊಂದಿರುವ ವರ್ತೂರು ಕೆರೆ ಅಭಿವೃದ್ಧಿಗೆ 53.81 ಲಕ್ಷ ರೂ. ಅನುದಾನವನ್ನು ಸಮಗ್ರ ಅಭಿವೃದ್ಧಿ ಯೋಜನೆಯಡಿ ಒದಗಿಸಲಾಗಿದೆ," ಎಂದರು.

VK
ವಿಜಯ ಕರ್ನಾಟಕ




ಬಿಬಿಎಂಪಿಯಿಂದ ಕಬ್ಬನ್ ಪಾರ್ಕ್‌ನಲ್ಲಿ ಭಾನುವಾರ ಆಯೋಜಿಸಿದ್ದ ಫಿಟ್ ಇಂಡಿಯಾ ಸೈಕ್ಲಥಾನ್ ಆಯೋಜಿಸಲಾಗಿತ್ತು .

ವಿಜಯವಾಣಿ
ಕನ್ನಡಿಗರ ಧ್ವನಿ

ವಿಜಯವಾಣಿ
ನಂ.1
ಕನ್ನಡ ದಿನಪತ್ರಿಕೆ




ನಾಗರಿಕರು ಸದೃಢವಾಗಿರಬೇಕು ಎಂಬ ನಿಟ್ಟಿನಲ್ಲಿ ಪ್ರಧಾನಿ ನರೇಂದ್ರ ಮೋದಿ ಚಾಲನೆ ನೀಡಿರುವ ಫಿಟ್ ಇಂಡಿಯಾ ಅಭಿಯಾನದ ಭಾಗವಾಗಿ ಬೆಂಗಳೂರಿನಲ್ಲಿ ಭಾನುವಾರ ಆಯೋಜಿಸಿದ್ದ ಸೈಕ್ಲಥಾನ್‌ನಲ್ಲಿ ಬಿಬಿಎಂಪಿ ಆಡಳಿತಾಧಿಕಾರಿ ಗೌರವ್ ಗುಪ್ತ, ಆಯುಕ್ತ ಮಂಜುನಾಥಪ್ರಸಾದ್, ಸ್ಮಾರ್ಟ್ ಸಿಟಿ ಲಿಮಿಟೆಡ್ ವ್ಯವಸ್ಥಾಪಕ ನಿರ್ದೇಶಕ ರಾಜೇಂದ್ರ ಚೋಳನ್ ಮತ್ತಿತರರು ಭಾಗವಹಿಸಿದ್ದರು.

Bengaluru Edition
Dec 21, 2020 Page No. 7
Powered by : eReleGo.com

ಉದಯವಾಣಿ
ಜನಮನದ ಜೀವನಾಡಿ

# ಸೈಕ್ಲಥಾನ್ ಮೂಲಕ ಫಿಟ್‌ನೆಸ್

## ಆಡಳಿತಾಧಿಕಾರಿ, ಆಯುಕ್ತರಿಂದ ಚಾಲನೆ

**ಬೆಂಗಳೂರು:** ಫಿಟ್ ಇಂಡಿಯಾನ ಅಭಿಯಾನದ ಅಂಗವಾಗಿ ಬಿಬಿಎಂಪಿ ಮತ್ತು ಬೆಂಗಳೂರು ಸ್ಮಾರ್ಟ್ ಸಿಟಿ ಲಿ. ಸಹಯೋಗದಲ್ಲಿ ನಗರದಲ್ಲಿ ಭಾನುವಾರ 'ಫಿಟ್ ಇಂಡಿಯಾ ಸೈಕ್ಲಥಾನ್' ನಡೆಯಿತು.

ಬೆಳಗ್ಗೆ 7ಕ್ಕೆ ಕಬ್ಬನ್ ಉದ್ಯಾನದ ಹಡ್ಸನ್ ವೃತ್ತದ ಬಳಿ ಬಿಬಿಎಂಪಿ ಆಡಳಿತಾಧಿಕಾರಿ ಗೌರವ್ ಗುಪ್ತ ಮತ್ತು ಆಯುಕ್ತ ಮಂಜುನಾಥ್ ಪ್ರಸಾದ್ ಸೈಕ್ಲಥಾನ್‌ಗೆ ಚಾಲನೆ ನೀಡಿದರು. ಅಲ್ಲಿಂದ ಚಿನ್ನಸ್ವಾಮಿ ಕ್ರೀಡಾಂಗಣದ ಕಸ್ತೂರಬಾ ರಸ್ತೆ ಮೂಲಕ ಪ್ರಧಾನ ಅಂಚೆ ಕಚೇರಿ ವೃತ್ತ, ರಾಜಭವನ ರಸ್ತೆ, ಚಾಲುಕ್ಯ ವೃತ್ತ, ಡಾ. ಬಿ.ಆರ್. ಅಂಬೇಡ್ಕರ್ ಬೀದಿ, ಎಂ.ಎಸ್.ಕಟ್ಟಡ, ಕೆ.ಆರ್.ವೃತ್ತ, ನೃಪತುಂಗ ರಸ್ತೆ ಮಾರ್ಗವಾಗಿ ಸಾಗಿ ಹಡ್ಸನ್ ವೃತ್ತಕ್ಕೆ ಹಿಂದಿರುಗಿ ಸೈಕ್ಲಥಾನ್ ಪೂರ್ಣಗೊಂಡಿತು.

ಈ ವೇಳೆ ಮಾತನಾಡಿದ ಆಯುಕ್ತ ಮಂಜುನಾಥ್ ಪ್ರಸಾದ್, ಪ್ರಧಾನಮಂತ್ರಿಗಳ ಕನಸಾಗಿರುವ ಫಿಟ್ ಇಂಡಿಯಾನ ಅಭಿಯಾನದ ಅಂಗವಾಗಿ ಪಾಲಿಕೆ ಹಾಗೂ ಬೆಂಗಳೂರು ಸ್ಮಾರ್ಟ್ ಸಿಟಿ ವತಿಯಿಂದ ಸೈಕ್ಲಥಾನ್ ಆಯೋಜನೆ ಮಾಡಲಾಗಿದೆ. ಪ್ರತಿಯೊಬ್ಬ ನಾಗರಿಕರೂ ಆರೋಗ್ಯವಾಗಿ, ದೈಹಿಕವಾಗಿ ಸದೃಢವಾಗಿರಬೇಕಾದರೆ ಪ್ರತಿನಿತ್ಯ ದೈಹಿಕ ಚಟುವಟಿಕೆ ಮುಖ್ಯವಾಗಿರುತ್ತದೆ. ಆದ್ದರಿಂದ ಎಲ್ಲರೂ ಫಿಟ್ ಆಗಿರುವ ಮೂಲಕ ಆರೋಗ್ಯಕರವಾಗಿರಬೇಕು ಎಂದರು.

ಇದೇ ವೇಳೆ ಕೊರೊನಾ ವಾರಿಯರ್‌ಗಳಾದ ವೈದ್ಯರು, ಸಂಚಾರಿ ವಿಭಾಗದ ಪೊಲೀಸರು, ಮಾರ್ಷಲ್‌ಗಳನ್ನು ಗುರುತಿಸಿ 2,000 ರೂ. ಪ್ರೋತ್ಸಾಹ ಗೌರವ ಧನ ಮತ್ತು ಸ್ಮರಣಿಕೆ ನೀಡಿ ಗೌರವಿಸಲಾಯಿತು. ಬೆಂಗಳೂರು ಸ್ಮಾರ್ಟ್‌ಸಿಟಿ ಲಿ. ವ್ಯವಸ್ಥಾಪಕ ನಿರ್ದೇಶಕ ರಾಜೇಂದ್ರ ಚೋಳನ್, ಪೂರ್ವ ವಲಯ ಜಂಟಿ ಆಯುಕ್ತೆ ಪಲ್ಲವಿ, ಮುಖ್ಯ ಆರೋಗ್ಯಾಧಿಕಾರಿ ಡಾ. ವಿಜೇಂದ್ರ ಹಾಗೂ ಸಂಚಾರ ವಿಭಾಗದ ಡಿಸಿಪಿ ನಾರಾಯಣ್ ಉಪಸ್ಥಿತರಿದ್ದರು.



ಕಬ್ಬನ್ ಉದ್ಯಾನದ ಹಡ್ಸನ್ ವೃತ್ತದ ಬಳಿ ಬಿಬಿಎಂಪಿ ಆಡಳಿತಾಧಿಕಾರಿ ಗೌರವ್ ಗುಪ್ತ, ಆಯುಕ್ತ ಮಂಜುನಾಥ್ ಪ್ರಸಾದ್ ಸೈಕ್ಲಥಾನ್‌ಗೆ ಚಾಲನೆ ನೀಡಿದರು.

ಸಂಯುಕ್ತ ಕರ್ನಾಟಕ



# ಪೌರ ಕಾರ್ಮಿಕನಿಗೆ ಕಪಾಳಮೋಕ್ಷ

**ಸಂಕ. ಸಮಾಚಾರ ಬೆಂಗಳೂರು**

ವಾಹನ ನಿಲುಗಡೆ ವಿಷಯವಾಗಿ ಪೌರಕಾರ್ಮಿಕನ ಮೇಲೆ ಸಂಚಾರಿ ವಿಭಾಗದ ಇನ್ಸ್‌ಪೆಕ್ಟರ್ ಅವಾಚ್ಯ ಶಬ್ದಗಳಿಂದ ನಿಂದಿಸಿ ಕಪಾಳಮೋಕ್ಷ ಮಾಡಿದ್ದು ಇದಕ್ಕೆ ಸಾರ್ವಜನಿಕರಿಂದ ಆಕ್ರೋಶ ವ್ಯಕ್ತವಾಗಿದೆ.

ಪೌರಕಾರ್ಮಿಕನ ಮೇಲೆ ಮಾಗಡಿ ರೋಡ್ ಟ್ರಾಫಿಕ್ ಇನ್‌ಸ್ಪೆಕ್ಟರ್ ಅವಾಚ್ಯ ಪದಗಳಿಂದ ನಿಂದಿಸಿ ಕಪಾಳಮೋಕ್ಷ ಮಾಡಿದ್ದಾರೆ ಎನ್ನಲಾದ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ. ಪೌರಕಾರ್ಮಿಕ ಕಸದ ವಾಹನವನ್ನು ರಸ್ತೆಯಲ್ಲಿ ನಿಲ್ಲಿಸಿದ್ದ ಸಂದರ್ಭದಲ್ಲಿ ಸ್ಥಳಕ್ಕೆ ಬಂದ ಸಂಚಾರ ವಿಭಾಗದ ಇನ್ಸ್‌ಪೆಕ್ಟರ್ ವಾಹನದ ಮಾಲೀಕನಿಗೆ ಅವಾಚ್ಯ ಶಬ್ದಗಳಿಂದ ನಿಂದಿಸಿದ್ದಾರೆನ್ನಲಾಗಿದೆ.

ಈ ವೇಳೆ ಇಬ್ಬರ ನಡುವೆ ಮಾತಿನ ಚಕಮಕಿಯಾದಾಗ ತಾಳ್ಮೆ ಕಳೆದುಕೊಂಡ ಇನ್ಸ್‌ಪೆಕ್ಟರ್ ಪೌರಕಾರ್ಮಿಕನಿಗೆ ಕಪಾಳಕ್ಕೆ ಹೊಡೆದಿದ್ದಾರೆ. ಸ್ಥಳೀಯರು ಈ ಕೃತ್ಯವನ್ನು ಸೆರೆಹಿಡಿದಿದ್ದು ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ. ಪೊಲೀಸರ ವರ್ತನೆ ಸಾರ್ವಜನಿಕರ ಕೆಂಗಣ್ಣಿಗೆ ಗುರಿಯಾಗಿದೆ.

ಸಂಯುಕ್ತ ಕನ

ಸಂಯುಕ್ತ ಕರ್ನಾಟಕ

# ಕೊರೊನಾ ವಾರಿಯರ್ಸ್‌ಗೆ ಗೌರವ

**ಬೆಂಗಳೂರು:** ಕೊರೊನಾ ಸೋಂಕು ಹರಡುವುದನ್ನು ತಡೆಗಟ್ಟಲು ಹಗಲಿರುಳು ಶ್ರಮಿಸುತ್ತಿರುವ ಕೊರೊನಾ ವಾರಿಯರ್ಸ್‌ಗೆ ಬೆಂಗಳೂರು ಸ್ಮಾರ್ಟ್ ಸಿಟಿ ವತಿಯಿಂದ ಸೈಕ್ಲೋಥಾನ್ ಮೂಲಕ ಗೌರವ ಸಲ್ಲಿಸಲಾಯಿತು.

ಸೈಕ್ಲೋಥಾನ್‌ಗೆ ಚಾಲನೆ ನೀಡಿದ ಬಿಬಿಎಂಪಿ ಆಡಳಿತಾಧಿಕಾರಿ ಗೌರವ್ ಗುಪ್ತ ಮಾತನಾಡಿ, ನಗರದಲ್ಲಿ ಕೋವಿಡ್ ವಾರಿಯರ್ಸ್‌ಗಳಾಗಿ ಹಗಲಿರುಳು ಶ್ರಮಿಸಿದವರಿಗೆ ಗೌರವ ಸಲ್ಲಿಸುತ್ತಿರುವುದು ಅಭಿನಂದನೀಯ ಎಂದರು.

ಆಯುಕ್ತ ಮಂಜುನಾಥ ಪ್ರಸಾದ್ ಮಾತನಾಡಿ, ಪ್ರಧಾನಮಂತ್ರಿಗಳ ಕನಸಾಗಿರುವ ಫಿಟ್ ಇಂಡಿಯಾ ಅಭಿಯಾನದ ಅಂಗವಾಗಿ ಇಂದು ಪಾಲಿಕೆ ಹಾಗೂ ಬೆಂಗಳೂರು ಸ್ಮಾರ್ಟ್ ಸಿಟಿ ವತಿಯಿಂದ ಸೈಕ್ಲೋಥಾನ್ ಆಯೋಜಿಸಲಾಗಿದೆ. ಪ್ರತಿಯೊಬ್ಬ ನಾಗರಿಕರೂ ಆರೋಗ್ಯವಾಗಿ, ದೈಹಿಕವಾಗಿ ಸದೃಢವಾಗಿರಬೇಕಾದರೆ ಪ್ರತಿನಿತ್ಯ ದೈಹಿಕ ಶಿಕ್ಷಣ ಬಹಳ ಮುಖ್ಯವಾಗಿರುತ್ತದೆ ಎಂದರು.

ಇದೇ ವೇಳೆ ಕೊರೊನಾ ವಾರಿಯರ್ಸ್ ಆಗಿ ಕಾರ್ಯನಿರ್ವಹಿಸಿದ ವೈದ್ಯರು, ಸಂಚಾರಿ ವಿಭಾಗದ ಪೊಲೀಸರು ಹಾಗೂ ಮಾರ್ಷಲ್ ಗಳನ್ನು ಗುರುತಿಸಿ 2,000 ರೂ. ಪ್ರೋತ್ಸಾಹ ಗೌರವಧನ, ಸ್ಮರಣಿಕೆ ನೀಡಿ ಗೌರವಿಸಲಾಯಿತು. ಇದಕ್ಕೂ ಮುನ್ನ ನಡೆದ ಸೈಕ್ಲೋಥಾನ್ ಹಡ್ಸನ್ ವೃತ್ತದಿಂದ ಚಿನ್ನಸ್ವಾಮಿ ಕ್ರೀಡಾಂಗಣದ ಕಸ್ತೂರಬಾ ರಸ್ತೆ(ಕ್ವೀನ್ಸ್ ರಸ್ತೆ) ಮೂಲಕ ಜಿ.ಪಿ.ಒ ವೃತ್ತ, ರಾಜಭವನ ರಸ್ತೆ, ಚಾಲುಕ್ಯ ವೃತ್ತ, ಡಾ. ಬಿ.ಆರ್.ಅಂಬೇಡ್ಕರ್ ವೀಧಿ (ಎಂ.ಎಸ್. ಕಟ್ಟಡ ಮಾರ್ಗವಾಗಿ), ಕೆ.ಆರ್.ವೃತ್ತ, ನೃಪತುಂಗ ರಸ್ತೆ ಮಾರ್ಗವಾಗಿ ಮತ್ತೆ ಹಡ್ಸನ್ ವೃತ್ತ ತಲುಪುವ ಮೂಲಕ ಸೈಕ್ಲೋಥಾನ್ ಪೂರ್ಣಗೊಂಡಿತ್ತು.



**ವಿಧಾನಸೌಧದ ಬಳಿ ಬಿಬಿಎಂಪಿ ವತಿಯಿಂದ ಭಾನುವಾರ ಜರುಗಿದ ಸೈಕ್ಲೋಥಾನ್ ಕಾರ್ಯಕ್ರಮದಲ್ಲಿ ಸೈಕಲ್‌ಸವಾರರು ಬಹಳ ಉತ್ಸಾಹದಿಂದ ಪಾಲ್ಗೊಂಡಿದ್ದರು.**

ಹೊಸ ದಿಗಂತ

ಹೊಸ ದಿಗಂತ



ಲಾಕ್‌ಡೌನ್ ಬಳಿಕ ನೌಕರರಿಗೆ ಸಂಬಳವೇ ಇಲ್ಲ | ಸ್ವಚ್ಛತೆ, ಗುಣಮಟ್ಟದ ಆಹಾರ ಇಲ್ಲದೆ ಊಟ ಮಾಡಲು ಜನ ಬರುತ್ತಿಲ್ಲ

# ನಿರ್ವಹಣೆ ಅಭಾವದಿಂದ ಸೊರಗಿದ ಇಂದಿರಾ ಕ್ಯಾಂಟೀನ್

• ನವೀನ್ ಗುಡಿಬಂಡೆ

**ಚಿಕ್ಕಬಳ್ಳಾಪುರ:** ಹಸಿವು ಮುಕ್ತ ಕರ್ನಾಟಕ ಮಾಡುವ ಉದ್ದೇಶ ದಿಂದ ಆರಂಭವಾದ ಇಂದಿರಾ ಕ್ಯಾಂಟೀನ್ ಸಮರ್ಪಕ ನಿರ್ವಹಣೆ ಇಲ್ಲದೆ ಗ್ರಹಣ ಹಿಡಿದ ಸ್ಥಿತಿಯಲ್ಲಿವೆ.

ಲಾಕ್ ಡೌನ್ ಬಳಿಕ ರಾಜ್ಯದ ಬಹುತೇಕ ಇಂದಿರಾ ಕ್ಯಾಂಟೀನ್‌ಗಳು ಅತಂತ್ರ ಸ್ಥಿತಿಯಲ್ಲಿವೆ. ಸರ್ಕಾರ ಕೂಡ ಇಂದಿರಾ ಕ್ಯಾಂಟೀನ್ ನಿರ್ವಹಣೆ ಬಗ್ಗೆ ಅಷ್ಟಾಗಿ ಆಸಕ್ತಿ ತೋರಿದಂತೆ ಕಾಣುತ್ತಿಲ್ಲ, ನೌಕರರಿಗೆ ಸಕಾಲದಲ್ಲಿ ಸಂಬಳ ಇಲ್ಲ, ಸ್ವಚ್ಛತೆ, ಗುಣಮಟ್ಟದ ಊಟ ನೀಡುತ್ತಿಲ್ಲ ಎಂಬ ಆರೋಪ ಇದೆ. ಇದರಿಂದಾಗಿ ಮೊದಲಿಗಿಂತ ಊಟ ಮಾಡುವವರ ಸಂಖ್ಯೆಯೂ ಕೂಡ ಕಡಿಮೆಯಾಗಿದೆ.

**ಮೂಲೆಗುಂಪಾದ ಕ್ಯಾಂಟೀನ್:** ಲಾಕ್‌ಡೌನ್ ಬಳಿಕ ಬಹುತೇಕವಾಗಿ ಆರ್ಥಿಕ ಚಟುವಟಿಕೆ ಮೇಲೆ ಹೆಚ್ಚು ಪರಿಣಾಮ ಚಿಕ್ಕಬಳ್ಳಾಪುರ ಜಿಲ್ಲೆಯ ಗುಡಿಬಂಡೆ ಸೇರಿದಂತೆ ವಿವಿಧ ಜಿಲ್ಲೆಗಳಲ್ಲೂ ಇಂದಿರಾ ಕ್ಯಾಂಟೀನ್ ಮೂಲೆಗುಂಪಾಗುವ ಸ್ಥಿತಿ ತಲುಪಿವೆ ಬೀರಿದೆ. ಇದರಿಂದಾಗಿ ಕ್ಯಾಂಟೀನ್‌ಗಳ ನಿರ್ವಹಣೆ ಕೂಡ ಬಹುತೇಕ ಕಷ್ಟವಾಗಿದೆ.

ದಿಗಂತ ವಿಶೇಷ

### ಕಾರ್ಮಿಕರ ಅಸಮಾಧಾನ

ಇಂದಿರಾಕ್ಯಾಂಟೀನ್‌ನಲ್ಲಿ ಕೆಲಸ ಮಾಡುತ್ತಿರುವ ನೌಕರರಿಗೆ ಕಳೆದ ನಾಲ್ಕು ತಿಂಗಳಿಂದಲೂ ಸಂಬಳ ನೀಡಿಲ್ಲ, ಕೊರೋನಾ ಆಂತಕದಿಂದಾಗಿ ಬೇರೆ ಉದ್ಯೋಗವೂ ದೊರಕುವ ಸ್ಥಿತಿಯಲ್ಲಿಲ್ಲ. ಇದರಿಂದಾಗಿ ಸರ್ಕಾರ ನೀಡುವ ಸಂಬಳವನ್ನೇ ನಂಬಿಕೊಂಡಿರುವ ನೌಕರರ ಜೀವನ ಸಂಕಷ್ಟದಲ್ಲಿದೆ. ಕೂಡಲೇ ಸಂಬಳ ಬಿಡುಗಡೆ ಮಾಡಬೇಕೆಂದು ಸರ್ಕಾರಕ್ಕೆ ಒತ್ತಾಯ ಮಾಡಿದ್ದಾರೆ.

**ಕ್ಯಾಂಟೀನ್ ನಿರ್ವಹಣೆ ಅಷ್ಟಕ್ಕೆ ಅಷ್ಟೇ :** ಹಿಂದಿನ ರಾಜ್ಯ ಸರ್ಕಾರ ಕೂಲಿ ಕಾರ್ಮಿಕರು ಮತ್ತು ಬಡವರ ಹಸಿವು ನೀಗಿಸುವ ಉದ್ದೇಶದಿಂದ ತೆರೆಯಲಾಗಿದ್ದ ಕ್ಯಾಂಟೀನ್ ಈಗ ಬಡವರಿಂದ ದೂರವಾಗುವ ಸ್ಥಿತಿ ದೂರವಿಲ್ಲ, ಪ್ರತಿದಿನ ಕ್ಯಾಂಟೀನ್ ನಿರ್ವಹಣೆ ಮಾಡಲು ಸಾಧ್ಯವಾಗದ ಸ್ಥಿತಿ ತಲುಪಿವೆ. ಈ ಸಮಸ್ಯೆಗೆ ಯಾರು ಹೊಣೆ ಎಂದು ಬಹುತೇಕ ಸಾರ್ವಜನಿಕರ ಪ್ರಶ್ನೆಯಾಗಿದೆ.





“ಕೊರೋನಾ ಹೆಸರಲ್ಲಿ ಬಡವರಿಗೆ, ಕೂಲಿ ಕಾರ್ಮಿಲರಿಗೆ ಇಂದಿರಾ ಕ್ಯಾಂಟೀನ್‌ಗಳಲ್ಲಿ ಒಂದು ಹೊತ್ತು ಊಟ ಹಾಕುವಲ್ಲಿ ಸರ್ಕಾರ ವಿಫಲವಾಗಿದೆ. ಸಂಬಂಧಪಟ್ಟ ಅಕಾರಿಗಳು ಸೂಕ್ತ ಕ್ರಮಕೈಗೊಂಡು ಕ್ಯಾಂಟೀನ್ ನಿರ್ವಹಣೆ ಹಾಗೂ ನೌಕರರ ಸಂಬಳಕ್ಕಾಗಿ ಸೂಕ್ತ ಕ್ರಮಕೈಗೊಳ್ಳಬೇಕು.

■ ಲಕ್ಷ್ಮೀನಾರಾಯಣ, ಸಿಪಿಎಂ ಮುಖಂಡ

### ಸರ್ಕಾರದ ಹಣ ದುರುಪಯೋಗ

ಸರ್ಕಾರದ ಮಾರ್ಗ ಸೂಚಿಯಂತೆ ಪ್ರತಿದಿನ ಕನಿಷ್ಠ 500 ಟೋಕನ್ ಅಂದರೆ 500 ಮಂದಿಗೆ ಊಟ ನೀಡಬೇಕು. ಆದರೆ ಇಲ್ಲ ಪ್ರತಿದಿನ 100ಕ್ಕಿಂತ ಕಡಿಮೆ ಜನರಿಗೆ ಊಟ ನೀಡಿ ಸಂಪೂರ್ಣ ಹಣದ ಬಿಲ್ ಮಾಡಿಕೊಳ್ಳುತ್ತಿದ್ದಾರೆ. ಅಲ್ಲದೆ ಆಹಾರ ಕೂಡ ಪೌಷ್ಟಿಕತೆಯಿಂದ ಕೂಡಿಲ್ಲ ಎಂದು ಸಾರ್ವಜನಿಕರ ದೂರಾಗಿದೆ.

“ಇಂದಿರಾ ಕ್ಯಾಂಟೀನ್‌ನ ಎಲ್ಲಾ ಸಮಸ್ಯೆ ಬಗ್ಗೆ ಮೇಲಿನ ಅಧಿಕಾರಿಗಳ ಗಮನಕ್ಕೆ ತರುತ್ತೇನೆ. ಗುಣಮಟ್ಟದ ಆಹಾರ, ನೌಕರರಿಗೆ ಸಕಾಲದಲ್ಲಿ ಸಂಬಳ ನೀಡುವ ಕುರಿತು ಮಾಹಿತಿ ನೀಡಲಾಗುವುದು.

■ ಮುಖ್ಯಾಧಿಕಾರಿ, ಪಟ್ಟಣ ಪಂಚಾಯಿತಿ ಗುಡಿಬಂಡೆ.

ಹೊಸ ದಿಗಂತ

# ಸಾವಿರಾರು ಮಂದಿಯಿಂದ ಸೈಕ್ಲಥಾನ್‌ಗೆ ಸಾಥ್



**ಬೆಂಗಳೂರು:** ಪ್ರತಿಯೊಬ್ಬ ನಾಗರಿಕರೂ ಆರೋಗ್ಯವಾಗಿ, ದೈಹಿಕವಾಗಿ ಸದೃಢವಾಗಿರಬೇಕಾದರೆ ಪ್ರತಿನಿತ್ಯ ದೈಹಿಕ ಶಿಕ್ಷಣ ಬಹಳ ಮುಖ್ಯವಾಗಿರುತ್ತದೆ ಎಂದು ಬಿಬಿಎಂಪಿ ಆಯುಕ್ತ ಮಂಜುನಾಥ್ ಪ್ರಸಾದ್ ತಿಳಿಸಿದರು.

ಬಿಬಿಎಂಪಿ ಹಾಗೂ ಬೆಂಗಳೂರು ಸ್ಮಾರ್ಟ್ ಸಿಟಿ ಲಿ.ವತಿಯಿಂದ ಹಡ್ಸನ್ ವೃತ್ತದಿಂದ ಹಮ್ಮಿಕೊಂಡಿರುವ ಜಾಗೃತಿ ಅಭಿಯಾನ ಫಿಟ್ ಇಂಡಿಯಾ ಸೈಕ್ಲಥಾನ್‌ಗೆ ಚಾಲನೆ ನೀಡಿ ಮಾತನಾಡಿದ ಅವರು, ಪ್ರಧಾನಮಂತ್ರಿ ಕನಸಾಗಿರುವ ಫಿಟ್ ಇಂಡಿಯಾನ ಅಭಿಯಾನದ ಅಂಗವಾಗಿ ಪಾಲಿಕೆ ಹಾಗೂ ಬೆಂಗಳೂರು ಸ್ಮಾರ್ಟ್ ಸಿಟಿ ವತಿಯಿಂದ ಸೈಕ್ಲಥಾನ್ ಆಯೋಜನೆ ಮಾಡಲಾಗಿದೆ. ಈ ಮೂಲಕ ಎಲ್ಲರೂ ಫಿಟ್ ಆಗಿರುವ ಮೂಲಕ ಆರೋಗ್ಯಕರವಾಗಿರಬೇಕು ಎಂದರು.

ನಗರದಲ್ಲಿ ಕೋವಿಡ್-19 ತಡೆಯಲು ಹಗಲಿರುಳು ಶ್ರಮಿಸಿದ ಸಾಕಷ್ಟು ಕೋವಿಡ್ ವಾರಿಯರ್ಸ್ ಗಳು ನಗರದಲ್ಲಿದ್ದು, ಅವರಲ್ಲಿ ಕೆಲವರನ್ನು ಗುರುತಿಸಿ ಸನ್ಮಾನಿಸುತ್ತಿರುವುದು ಅಭಿನಂದನೀಯ ಎಂದರು.

ಕೋವಿಡ್-19 ವಾರಿಯರ್ಸ್‌ಗಳಾಗಿ ಕಾರ್ಯ ನಿರ್ವಹಿಸುವ ವೈದ್ಯರು, ಸಂಚಾರಿ ವಿಭಾಗದ ಪೊಲೀಸರು ಹಾಗೂ ಮಾರ್ಷಲ್‌ಗಳನ್ನು ಗುರುತಿಸಿ 2,000 ರೂ. ಪ್ರೋತ್ಸಾಹ ಧನ ಹಾಗೂ ಸ್ಮರಣಿಕೆ ನೀಡಿ ಗೌರವಿಸಲಾಯಿತು.

ಜನದನಿಯ ಸಾರಥಿ
ವಾರ್ತಾ ಭಾರತಿ

# ಸರಕಾರಿ ಆಸ್ಪತ್ರೆಗಳಲ್ಲಿ ಶೇ.70 ಹಾಸಿಗೆಗಳು ಖಾಲಿ!



ಸಂಗ್ರಹ ಚಿತ್ರ

**ಬೆಂಗಳೂರು, ಡಿ. 20: ಸಿಲಿಕಾನ್ ಸಿಟಿಯಲ್ಲಿ ದಿನದಿಂದ ದಿನಕ್ಕೆ ಕೊರೋನ ಸೋಂಕಿತರ ಸಂಖ್ಯೆ ಗಣನೀಯವಾಗಿ ಇಳಿಮುಖ ವಾಗುತ್ತಿರುವುದರಿಂದ ಸೋಂಕಿತರನ್ನು ಖಾಸಗಿ ಆಸ್ಪತ್ರೆಗಳಿಗೆ ಶಿಫಾರಸು ಮಾಡುವುದನ್ನು ನಿಲ್ಲಿಸಲಾಗಿದೆ. ಆದರೂ, ಸರಕಾರಿ ಆಸ್ಪತ್ರೆಗಳಲ್ಲಿ ಶೇ.70ರಷ್ಟು ಹಾಸಿಗೆಗಳು ಖಾಲಿಯುಳಿಯುತ್ತಿವೆ.**

ರಾಜಧಾನಿಯಲ್ಲಿ ಮಾರ್ಚ್ ಆರಂಭದಲ್ಲಿ ಕಡಿಮೆಯಿದ್ದ ಕೊರೋನ ಸೋಂಕಿತರ ಸಂಖ್ಯೆ ತದನಂತರ ಜುಲೈ ವೇಳೆಗೆ ದೊಡ್ಡ ಪ್ರಮಾಣದಲ್ಲಿ ಏರಿಕೆ ಕಂಡಿದ್ದರಿಂದ ಕೋವಿಡ್ ಚಿಕಿತ್ಸೆಗೆ ಗುರುತಿಸಲಾದ ಸರಕಾರಿ ಆಸ್ಪತ್ರೆಗಳು ಹಾಗೂ ವೈದ್ಯಕೀಯ ಕಾಲೇಜುಗಳಲ್ಲಿನ ಬಹುತೇಕ ಹಾಸಿಗೆಗಳು ಭರ್ತಿಯಾಗಿದ್ದವು. ಅಲ್ಲದೆ, ಹಲವರಿಗೆ ಹಾಸಿಗೆಗಳು ಸಿಗದೇ ಪರದಾಡಿದ, ಸಾವನ್ನಪ್ಪಿದ ಘಟನೆಗಳೂ ನಡೆದವು.

ಆ ಬಳಿಕ ಹಜ್ ಭವನ, ರವಿಶಂಕರ ಗುರೂಜಿ ಆಶ್ರಮ, ಕೃಷಿ ವಿಶ್ವವಿದ್ಯಾನಿಲಯ (ಜಿಕೆವಿಕೆ), ಅಂತರ್‌ರಾಷ್ಟ್ರೀಯ ಪ್ರದರ್ಶನ ಕೇಂದ್ರ, ಸೇರಿದಂತೆ ನಗರದ ವಿವಿಧೆಡೆ ಕೋವಿಡ್ ಆರೈಕೆ ಕೇಂದ್ರಗಳನ್ನು ಪ್ರಾರಂಭಿಸಲಾಗಿತ್ತು. ಇಷ್ಟಾಗಿಯೂ ಹಾಸಿಗೆಗಳ ಸಮಸ್ಯೆ ನಿವಾರಣೆಯಾಗದ ಪರಿಣಾಮ ಖಾಸಗಿ ಆಸ್ಪತ್ರೆಗಳಿಗೆ ದರ ನಿಗದಿಪಡಿಸಿ, ಚಿಕಿತ್ಸೆಗೆ ಅವಕಾಶ ನೀಡಲಾಗಿತ್ತು. ಅದರಂತೆ 73 ಖಾಸಗಿ ಆಸ್ಪತ್ರೆಗಳಲ್ಲಿ ಶೇ. 50 ರಷ್ಟು ಹಾಸಿಗೆಗಳನ್ನು ಸರಕಾರವು ಶಿಫಾರಸು ಮಾಡುವ ರೋಗಿಗಳಿಗೆ ಮೀಸಲಿಡಬೇಕಿತ್ತು. 5 ಸಾವಿರಕ್ಕೂ ಅಧಿಕ ಹಾಸಿಗೆಗಳನ್ನು ಖಾಸಗಿ ಆಸ್ಪತ್ರೆಗಳಲ್ಲಿ ಗುರುತಿಸಲಾಗಿತ್ತು.

ಆದರೆ, ಕಳೆದ ಎರಡು ತಿಂಗಳಿನಿಂದ ಪ್ರಕರಣಗಳ ಸಂಖ್ಯೆ ಇಳಿಕೆ ಕಂಡ ಕಾರಣ ಖಾಸಗಿ ಆಸ್ಪತ್ರೆಗಳಿಗೆ ಶಿಫಾರಸು ಮಾಡುವ ನಿಯಮವನ್ನು ಕೈಬಿಡಲಾಗಿದೆ.

■ **ಮನೆಯಲ್ಲಿಯೇ ಆರೈಕೆ:** ಕೊರೋನ ಸೋಂಕಿನ ಕುರಿತು ಜನರಿಗೆ ಹಲವು ಹಂತದಲ್ಲಿ ಜಾಗೃತಿ ಮೂಡಿಸಲಾಗಿದೆ. ಅಲ್ಲದೆ, ಜನರಲ್ಲಿರುವ ಆತಂಕವನ್ನು ಹೋಗಲಾಡಿಸಲಾಗಿದೆ. ಹೀಗಾಗಿ, ಪ್ರಸ್ತುತ ಕೋವಿಡ್ ಬಾಧಿತ ಬಹುತೇಕರು ಮನೆಯಲ್ಲಿಯೇ ಆರೈಕೆಗೆ ಒಳಪಡುತ್ತಿದ್ದಾರೆ. ಹೀಗಾಗಿ, ಹೆಚ್ಚು ಜನ ಆಸ್ಪತ್ರೆಗೆ ಬರಲು ನಿರಾಕರಿಸಲಾಗುತ್ತಿದ್ದು, ಅದರ ಪರಿಣಾಮ ಸರಕಾರಿ ಆಸ್ಪತ್ರೆಗಳು ಹಾಗೂ ವೈದ್ಯಕೀಯ ಕಾಲೇಜುಗಳಲ್ಲಿ ಸದ್ಯ 558 ಮಂದಿ ಮಾತ್ರ ಚಿಕಿತ್ಸೆ ಪಡೆಯುತ್ತಿದ್ದಾರೆ. ಅಲ್ಲಿ 1,071 ಹಾಸಿಗೆಗಳು ಖಾಲಿಯಿವೆ. ಸದ್ಯ ನಗರದಲ್ಲಿ 10 ಸಾವಿರಕ್ಕೂ ಅಧಿಕ ಸಕ್ರಿಯ ಪ್ರಕರಣಗಳಿವೆ.

■ **ಕೋವಿಡೇತರ ಚಿಕಿತ್ಸೆಗೆ ಬಳಕೆ:** ಬಹುತೇಕ ಕೋವಿಡ್ ರೋಗಿಗಳಿಗೆ ಸೋಂಕಿನ ಲಕ್ಷಣಗಳು ಬಹಿರಂಗವಾಗಿ ಗೋಚರಿಸುತ್ತಿಲ್ಲ. ಅಂತಹವರು ಹೆಚ್ಚಾಗಿ ಮನೆಯಲ್ಲಿಯೇ ಆರೈಕೆ ಮಾಡಿಕೊಳ್ಳುತ್ತಿದ್ದಾರೆ. ಹೀಗಾಗಿಯೇ ಖಾಸಗಿ ಆಸ್ಪತ್ರೆಗಳಿಗೆ ರೋಗಿಗಳನ್ನು ಶಿಫಾರಸು ಮಾಡುವ ನಿಯಮವನ್ನು ಸದ್ಯಕ್ಕೆ ಕೈಬಿಡಲಾಗಿದೆ. ಇದೇ ರೀತಿ ಆಸ್ಪತ್ರೆಗೆ ದಾಖಲಾಗುವವರ ಸಂಖ್ಯೆ ಇಳಿಕೆ ಕಂಡಲ್ಲಿ ಮುಂದಿನ ದಿನಗಳಲ್ಲಿ ಮೀಸಲಿರಿಸಿದ ಹಾಸಿಗೆಗಳನ್ನು ಕೋವಿಡೇತರ ಚಿಕಿತ್ಸೆಗೆ ಬಳಸಿಕೊಳ್ಳಲಾಗುತ್ತದೆ ಎಂದು ಆರೋಗ್ಯ ಇಲಾಖೆಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಜನದನಿಯ ಸಾರಥಿ
ವಾರ್ತಾ ಭಾರತಿ

ಜನದನಿಯ ಸಾರಥಿ
ವಾರ್ತಾ ಭಾರತಿ

# ದೇಹಕ್ಕೆ ಆಹಾರಕ್ರಮ, ವ್ಯಾಯಾಮ ಮುಖ್ಯ

**ಗೌರವ್ ಗುಪ್ತ**

ಬೆಂಗಳೂರು, ಡಿ.20: ಮನುಷ್ಯನ ದೈಹಿಕ ಆರೋಗ್ಯಕ್ಕಾಗಿ ಆಹಾರಕ್ರಮ, ವ್ಯಾಯಾಮದಂತಹ ಚಟುವಟಿಕೆಗಳೂ ಪ್ರಮುಖ ಪಾತ್ರ ವಹಿಸುತ್ತವೆ ಎಂದು ಬಿಬಿಎಂಪಿ ಆಡಳಿತಾಧಿಕಾರಿ ಗೌರವ್ ಗುಪ್ತ ಅಭಿಪ್ರಾಯಪಟ್ಟಿದ್ದಾರೆ.

ರವಿವಾರ ನಗರದ ಕಬ್ಬನ್ ಪಾರ್ಕ್‌ನಲ್ಲಿ ಬೆಂಗಳೂರು ಸ್ಮಾರ್ಟ್ ಸಿಟಿ, ಪಾಲಿಕೆ ವತಿಯಿಂದ ಏರ್ಪಡಿಸಿದ್ದ 'ಫಿಟ್ ಇಂಡಿಯಾ ಸೈಕ್ಲಥಾನ್'ಗೆ ಚಾಲನೆ ನೀಡಿ ಮಾತನಾಡಿದ ಅವರು, ನಿಯಮಿತ ವ್ಯಾಯಾಮದಿಂದ ದೈಹಿಕ ಕಾರ್ಯವ್ಯವಸ್ಥೆಗಳನ್ನು ಸುಧಾರಿಸಬಹುದು. ಅದರಲ್ಲೂ ಈ ಕೊರೋನ ಸಮಯದಲ್ಲಿ ಮನೆಯೊಳಗೆ ಹೆಚ್ಚು ಕುಳಿತಿರುವ ದೇಹಕ್ಕೆ ವ್ಯಾಯಾಮದ ಅಗತ್ಯ ಹೆಚ್ಚಿದೆ ಎಂದರು.

ಬಿಬಿಎಂಪಿ ಆಯುಕ್ತ ಮಂಜುನಾಥ ಪ್ರಸಾದ್ ಮಾತನಾಡಿ, ಪ್ರಧಾನಮಂತ್ರಿಗಳ ಕನಸಾಗಿರುವ ಫಿಟ್ ಇಂಡಿಯಾನ ಅಭಿಯಾನದ ಅಂಗವಾಗಿ ಸೈಕ್ಲಥಾನ್ ಆಯೋಜನೆ ಮಾಡಲಾಗಿದೆ. ಪ್ರತಿಯೊಬ್ಬ ನಾಗರಿಕರೂ ಆರೋಗ್ಯವಾಗಿ, ದೈಹಿಕವಾಗಿ ಸದೃಢವಾಗಿರಬೇಕಾದರೆ ಪ್ರತಿನಿತ್ಯ ದೈಹಿಕ ಶಿಕ್ಷಣ ಬಹಳ ಮುಖ್ಯವಾಗಿರುತ್ತದೆ. ಆದ್ದರಿಂದ ಎಲ್ಲರೂ ಫಿಟ್ ಆಗಿ



ರುವ ಮೂಲಕ ಆರೋಗ್ಯಕರವಾಗಿರಬೇಕು ಎಂದರು.

ಸೈಕ್ಲಥಾನ್ ವೇಳೆ ಫಿಟ್ ಇಂಡಿಯಾ ಅಂಗವಾಗಿ ಪಾಲಿಕೆ ವ್ಯಾಪ್ತಿಯಲ್ಲಿ ಬೆಂಗಳೂರು ಸ್ಮಾರ್ಟ್ ಸಿಟಿಯು ಕೋವಿಡ್-19 ವಾರಿಯರ್‌ಗಳಾಗಿ ಕಾರ್ಯನಿರ್ವಹಿಸುವ ವೈದ್ಯರು, ಸಂಚಾರಿ ವಿಭಾಗದ ಪೊಲೀಸರು ಹಾಗೂ ಮಾರ್ಷಲ್‌ಗಳನ್ನು ಗುರುತಿಸಿ 2 ಸಾವಿರ ರೂ. ಪ್ರೋತ್ಸಾಹ ಗೌರವ ಮೊತ್ತ, ಸ್ಮರಣಿಕೆ ನೀಡಿ ಗೌರವಿಸಲಾಯಿತು.

ಬೆಂಗಳೂರು ಸ್ಮಾರ್ಟ್ ಸಿಟಿ ಲಿ. ವ್ಯವಸ್ಥಾಪಕ ನಿರ್ದೇಶಕ ರಾಜೇಂದ್ರ ಚೋಳನ್, ಪಾಲಿಕೆಯ ಪೂರ್ವ ವಲಯ ಜಂಟಿ ಆಯುಕ್ತೆ ಪಲ್ಲವಿ, ಮುಖ್ಯ ಆರೋಗ್ಯಾಧಿಕಾರಿ ಡಾ.ವಿಜೇಂದ್ರ, ಸಂಚಾರ ವಿಭಾಗದ ಡಿಸಿಪಿ ನಾರಾಯಣ್ ಸೇರಿದಂತೆ ಪ್ರಮುಖರಿದ್ದರು.

Bengaluru Edition
Dec 21, 2020 Page No.8

ಸಂಜೆವಾಣಿ
1982

# ಫಿಟ್ ಇಂಡಿಯಾ ಸೈಕ್ಲಥಾನ್‌ಗೆ ಗೌರವ್ ಗುಪ್ತ ಚಾಲನೆ




ಬಿಬಿಎಂಪಿ ಇಂದು ಕಬ್ಬನ್‌ಪಾರ್ಕ್‌ನಲ್ಲಿ ಏರ್ಪಡಿಸಿದ್ದ ಫಿಟ್ ಇಂಡಿಯಾ ಸೈಕ್ಲಥಾನ್‌ಗೆ ಆಡಳಿತಾಧಿಕಾರಿ ಗೌರವ್ ಗುಪ್ತ ಅವರು ಬೈಸಿಕಲ್ ತುಳಿಯುವ ಮೂಲಕ ಚಾಲನೆ ನೀಡಿದರು. ಬೆಂಗಳೂರು ಸ್ಮಾರ್ಟ್ ಸಿಟಿ ಲಿಮಿಟೆಡ್‌ನ ವ್ಯವಸ್ಥಾಪಕ ನಿರ್ದೇಶಕ ರಾಜೇಂದ್ರ ಚೋಳನ್ ಮತ್ತಿತರರು ಇದ್ದಾರೆ.

ಬೆಂಗಳೂರು, ಡಿ.20–ಮನುಷ್ಯನ ದೈಹಿಕ ಹಾಗೂ ಮಾನಸಿಕ ಆರೋಗ್ಯ ಸುಧಾರಣೆಯಲ್ಲಿ ಆಹಾರಕ್ರಮ, ವ್ಯಾಯಾಮದಂತಹ ಚಟುವಟಿಕೆಗಳು ಪ್ರಮುಖ ಪಾತ್ರ ವಹಿಸುತ್ತವೆ ಎಂದು ಬಿಬಿಎಂಪಿ ಆಡಳಿತಾಧಿಕಾರಿ ಗೌರವ್ ಗುಪ್ತ ಅಭಿಪ್ರಾಯಪಟ್ಟರು.

ನಗರದಲ್ಲಿಂದು ಕಬ್ಬನ್ ಪಾರ್ಕ್ ಒಳಾಂಗಣದಲ್ಲಿ ಬೆಂಗಳೂರು ಸ್ಮಾರ್ಟ್ ಸಿಟಿ, ಪಾಲಿಕೆವತಿಯಿಂದ ಆಯೋಜಿಸಿದ್ದ ಫಿಟ್ ಇಂಡಿಯಾ ಸೈಕ್ಲಥಾನ್ ಚಾಲನೆ ನೀಡಿ ಅವರು ಮಾತನಾಡಿದರು.

ನಿಯಮಿತ ವ್ಯಾಯಾಮದಿಂದ ದೈಹಿಕ ಕಾರ್ಯವ್ಯವಸ್ಥೆಗಳನ್ನು ಸುಧಾರಿಸಬಹುದು. ಅದರಲ್ಲೂ ಈ ಕೊರೊನಾ ಸಮಯದಲ್ಲಿ ಮನೆಯೊಳಗೆ ಹೆಚ್ಚು ಕುಳಿತಿರುವ ದೇಹಕ್ಕೆ ವ್ಯಾಯಾಮದ ಅಗತ್ಯ ಹೆಚ್ಚಿದೆ.

ಇನ್ನು ನಿಯಮಿತವಾಗಿ ವ್ಯಾಯಾಮ ಮಾಡಿ ಫಿಟ್‌ನೆಸ್ ಕಾಪಾಡಿಕೊಳ್ಳುವುದರಿಂದ ಹಲವು ಪ್ರಯೋಜನಗಳಿವೆ ಎಂದರು.

ಬಿಬಿಎಂಪಿ ಆಯುಕ್ತ ಮಂಜುನಾಥ ಪ್ರಸಾದ್ ಮಾತನಾಡಿ, ಪ್ರಧಾನಮಂತ್ರಿಗಳ ಕನಸಾಗಿರುವ ಫಿಟ್ ಇಂಡಿಯಾನ ಅಭಿಯಾನದ ಅಂಗವಾಗಿ ಸೈಕ್ಲಥಾನ್ ಆಯೋಜನೆ ಮಾಡಲಾಗಿದೆ. ಪ್ರತಿಯೊಬ್ಬ ನಾಗರಿಕರೂ ಆರೋಗ್ಯವಾಗಿ, ದೈಹಿಕವಾಗಿ ಸದೃಢವಾಗಿರಬೇಕಾದರೆ, ಪ್ರತಿನಿತ್ಯ ದೈಹಿಕ ಶಿಕ್ಷಣ ಬಹಳ ಮುಖ್ಯವಾಗಿರುತ್ತದೆ. ಆದ್ದರಿಂದ ಎಲ್ಲರೂ ಫಿಟ್ ಆಗಿರುವ ಮೂಲಕ ಆರೋಗ್ಯಕರವಾಗಿರಬೇಕು ಎಂದರು.

ನಗರದಲ್ಲಿ ಕೋವಿಡ್–19 ತಡೆಯಲು ಹಗಲಿರುಳು ಶ್ರಮಿಸಿದ ಸಾಕಷ್ಟು ಕೋವಿಡ್ ವಾರಿಯರ್ಸ್‌ಗಳು ನಗರದಲ್ಲಿದ್ದಾರೆ.

ಅವರಲ್ಲಿ ಕೆಲವರನ್ನು ಗುರುತಿಸಿ ಇಂದು ಸನ್ಮಾನಿಸುತ್ತಿರುವುದು ಅಭಿನಂದನೀಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಇದೇ ವೇಳೆ, ಫಿಟ್ ಇಂಡಿಯಾ ಅಂಗವಾಗಿ ಪಾಲಿಕೆ ವ್ಯಾಪ್ತಿಯಲ್ಲಿ ಬೆಂಗಳೂರು ಸ್ಮಾರ್ಟ್ ಸಿಟಿಯು ಕೋವಿಡ್–19 ವಾರಿಯರ್ಸ್ ಗಳಾಗಿ ಕಾರ್ಯನಿರ್ವಹಿಸುವ ವೈದ್ಯರು, ಸಂಚಾರಿ ವಿಭಾಗದ ಪೊಲೀಸರು ಹಾಗೂ ಮಾರ್ಷಲ್ ಗಳನ್ನು ಗುರುತಿಸಿ 2,000 ರೂ. ಪ್ರೋತ್ಸಾಹ ಗೌರವ ಮೊತ್ತ, ಸ್ಮರಣಿಕೆ ನೀಡಿ ಗೌರವಿಸಲಾಯಿತು.

ಬೆಂಗಳೂರು ಸ್ಮಾರ್ಟ್ ಸಿಟಿ ಲಿ. ವ್ಯವಸ್ಥಾಪಕ ನಿರ್ದೇಶಕ ರಾಜೇಂದ್ರ ಚೋಳನ್, ಪೂರ್ವ ವಲಯ ಜಂಟಿ ಆಯುಕ್ತೆ ಪಲ್ಲವಿ, ಮುಖ್ಯ ಆರೋಗ್ಯಾಧಿಕಾರಿ ಡಾ. ವಿಜೇಂದ್ರ, ಸಂಚಾರ ವಿಭಾಗದ ಡಿಸಿಪಿ ನಾರಾಯಣ್ ಸೇರಿದಂತೆ ಪ್ರಮುಖರಿದ್ದರು

ಸಂಜೆ ವಾಣಿ
1982

ಸಂಜೆ ವಾಣಿ

# ಒತ್ತಡ ಕಡಿಮೆಗೆ ಉದ್ಯಾನವನ ಉಪಯುಕ್ತ

ಬೆಂಗಳೂರು,ಡಿ.20–ಮಹಾಲಕ್ಷ್ಮೀ ಲೇಔಟ್ ವಿಧಾನಸಭಾ ಕ್ಷೇತ್ರದ ನಾಗಪುರ ವಾರ್ಡ್ ವ್ಯಾಪ್ತಿಯಲ್ಲಿ ಬರುವ ರಾಜಾಜಿನಗರ "ಆರ್"ಮತ್ತು "ಎನ್" ಬ್ಲಾಕ್ ನಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಹಾಗೂ ಮುಖ್ಯ ಮಂತ್ರಿಗಳ ನವನಗರೋತ್ಥಾನ ಯೋಜನೆಯಡಿ ನಿರ್ಮಿಸಿರುವ ನವ ಉದ್ಯಾನವನ ಉದ್ಘಾಟನಾ ಸಮಾರಂಭ ನಡೆಯಿತು.

ಈ ಸಮಾರಂಭಕ್ಕೆ ಕೇಂದ್ರದ ರಾಸಾಯನಿಕ ಹಾಗೂ ರಸಗೊಬ್ಬರ ಖಾತೆಯ ಸಚಿವರು ಹಾಗೂ ಬೆಂಗಳೂರು ಉತ್ತರ ಲೋಕಸಭಾ ಕ್ಷೇತ್ರದ ಸಂಸದರಾದ ಡಿ ವಿ ಸದಾನಂದ ಗೌಡರು ಹಾಗೂ ಸ್ಥಳೀಯ ಶಾಸಕರು ಹಾಗೂ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರಾದ ಕೆ ಗೋಪಾಲಯ್ಯ ಅವರು ಆಗಮಿಸಿ ರಿಬ್ಬನ್ ಕಟ್ ಮಾಡುವ ಮೂಲಕ ಉದ್ಘಾಟಿಸಿದರು.

ನಂತರ ಉದ್ಯಾನವನದ ಸುತ್ತಲೂ ಸುತ್ತಾಡಿ,ತೆರೆದ ಜಿಮ್,ಹಸಿರು ಗಿಡಗಳ ಮಧ್ಯೆ ಒಳ್ಳೆಯ ವಾತಾವರಣವನ್ನ ವೀಕ್ಷಿಸಿದರು. ನಂತರ ಮಾತನಾಡಿದ ಸಚಿವರು ಉತ್ತಮ ಸ್ವಾಸ್ಥ್ಯ ಆರೋಗ್ಯ ಕಾಪಾಡಿಕೊಳ್ಳಲು ನಗರೀಕರಣ ಒತ್ತಡದಿಂದ ಕಾಪಾಡಿಕೊಳ್ಳಲು ಪಾರ್ಕ್ ಗಳು ಉಪಯುಕ್ತವಾಗಿವೆ. ಸ್ಥಳೀಯ ನಿವಾಸಿಗಳಿಗೆ ಇದರ ಪ್ರಯೋಜನ ಪಡೆದು ಆರೋಗ್ಯಕರ ಜೀವನ ನಡೆಸಲು ತಿಳಿಸಿದರು.



ಮಹಾಲಕ್ಷ್ಮೀ ಲೇ ಔಟ್ ಕ್ಷೇತ್ರದ ನಾಗಪುರ ವಾರ್ಡ್ ವ್ಯಾಪ್ತಿಯಲ್ಲಿ ನಿರ್ಮಿಸಿರುವ "ನವ ಉದ್ಯಾನವನ"ವನ್ನು ಕೇಂದ್ರ ಸಚಿವ ಡಿ.ವಿ. ಸದಾನಂದಗೌಡ ಅವರು ಇಂದು ಉದ್ಘಾಟಿಸಿದರು. ಸಚಿವ ಕೆ. ಗೋಪಾಲಯ್ಯ, ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷ ನೆ.ಲ. ನರೇಂದ್ರ ಬಾಬು, ಮಾಜಿ ಉಪ ಮೇಯರ್, ಎಸ್. ಹರೀಶ್, ಮತ್ತಿತರರು ಇದ್ದಾರೆ.

ನಂತರ ಮಾತನಾಡಿದ ಆಹಾರ ಸಚಿವರಾದ ಕೆ ಗೋಪಾಲಯ್ಯ ಅವರು ಮಹಾಲಕ್ಷ್ಮೀ ಲೇಔಟ್ ವಿಧಾನ ಸಭಾ ಕ್ಷೇತ್ರದ ಪ್ರತಿಯೊಬ್ಬ ನಾಗರಿಕರು ಸದೃಢ ಆರೋಗ್ಯ ಹಾಗೂ ಉತ್ತಮ ಜೀವನ ನಡೆಸಲು ಬೇಕಾದ ಎಲ್ಲ ಕ್ರಮಗಳನ್ನು ಕೈಗೊಳ್ಳಲಾಗಿದ್ದು, ಮಾನ್ಯ ಮುಖ್ಯಮಂತ್ರಿ ಬಿ ಎಸ್ ಯಡಿಯೂರಪ್ಪನವರ ನೇತೃತ್ವದ ಸರ್ಕಾರದಲ್ಲಿ ಇನ್ನೂ ಅತಿ ಹೆಚ್ಚಿನ ಅನುದಾನ ತಂದು ಕ್ಷೇತ್ರದ ಅಭಿವೃದ್ಧಿ ಕಾರ್ಯಗಳನ್ನು ಮಾಡಲಾಗುವುದು ಎಂದರು.

ಈ ಸಂದರ್ಭದಲ್ಲಿ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷರಾದ ನರೇಂದ್ರ ಬಾಬು, ಬಿಬಿಎಂಪಿ ಉಪ ಮಹಾ ಪೌರರಾದ ಎಸ್.ಹರೀಶ್, ಭದ್ರೆಗೌಡ, ಬೆಂಗಳೂರು ಉತ್ತರ ಜಿಲ್ಲೆ ಬಿಜೆಪಿ ಅಧ್ಯಕ್ಷರಾದ ನಾರಾಯಣ ಗೌಡ, ಕ್ಷೇತ್ರ ಬಿಜೆಪಿ ಮಂಡಲ ಅಧ್ಯಕ್ಷರಾದ ರಾಘವೇಂದ್ರ ಶೆಟ್ಟಿ, ಮಾಜಿ ಪಾಲಿಕೆ ಸದಸ್ಯ ರಾಜೇಂದ್ರ ಕುಮಾರ್, ವೆಂಕಟೇಶ್ ಮೂರ್ತಿ, ವೆಂಕಟೇಶ್ ಮಾಮಾ, ರೈಲ್ವೇ ನಾರಾಯಣ್, ಪ್ರಸನ್ನ ಮುನಿರಾಜು, ಬಿಬಿಎಂಪಿ ಹಿರಿಯ ಅಧಿಕಾರಿಗಳು,ಹಾಗೂ ಎಲ್ಲ ಮೋರ್ಚಾದ ಅಧ್ಯಕ್ಷರು,ಉಪಾಧ್ಯಕ್ಷರು, ಸದಸ್ಯರು ಮಹಿಳಾ ಮೋರ್ಚಾ ಪದಾಧಿಕಾರಿಗಳು ಕಾರ್ಯಕರ್ತರು ಉಪಸ್ಥಿತರಿದ್ದರು.

ಸಮಸ್ತ ಕನ್ನಡಿಗರ ನಂ.1 ಸಂಜೆ ದಿನಪತ್ರಿಕೆ
ಈ ಸಂಜೆ




ಬಿಬಿಎಂಪಿ ವತಿಯಿಂದ ಇಂದು ಹಮ್ಮಿಕೊಂಡಿದ್ದ ಫಿಟ್ ಇಂಡಿಯಾ ಸೈಕ್ಲೋಥಾನ್‌ನಲ್ಲಿ ಬೆಂಗಳೂರು ಸ್ಮಾರ್ಟ್ ಸಿಟಿ ವ್ಯವಸ್ಥಾಪಕ ನಿರ್ದೇಶಕ ರಾಜೇಂದ್ರಚೋಳನ್, ಆಡಳಿತಾಧಿಕಾರಿ ಗೌರವ ಗುಪ್ತ, ಆಯುಕ್ತ ಮಂಜುನಾಥ್ ಪ್ರಸಾದ್, ಜಂಟಿ ಆಯುಕ್ತರಾದ ಪಲ್ಲವಿ, ಆರೋಗ್ಯಾಧಿಕಾರಿ ವಿಜಯೇಂದ್ರ, ಡಿಸಿಪಿ ನಾರಾಯಣ್ ಮತ್ತಿತರರು ಪಾಲ್ಗೊಂಡಿದ್ದರು.